Phone: 08282-257424
E-Mail: kuhrmsection@gmail.com
Fax: 08282-256262
Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ ಶಂಕರಘಟ್ಟ – 577 451

**ಮಾನವ ಸಂಪನ್ಮೂಲ ಮತ್ತು ನಿರ್ವಹಣೆ ವಿಭಾಗ**

ಸಂಖ್ಯೆ: ಕುವಿ: ಮಾಸನಿ–7/ 7693/2019–20 ದಿನಾಂಕ:23–03–2020

## ಸುತ್ತೋಲೆ

ವಿಷಯ: ಕೋವಿಡ್–19 (ಕೊರೊನಾ ವೈರಸ್) ನಿಯಂತ್ರಿಸುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯ ಹಾಗೂ ಘಟಕ ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳ ಬೋಧಕ / ಬೋಧಕೇತರ / ಅತಿಥಿ ಉಪನ್ಯಾಸಕರು / ಏಜೆನ್ಸಿ ಸಿಬ್ಬಂದಿಗಳಿಗೆ ರಜೆ ಘೋಷಿಸುವ ಕುರಿತು.

ಉಲ್ಲೇಖ: 1. MHRD, New Delhi – D.O.Letter No:Secy(HE)/ MHRD/ 2020 dated: 21-03-2020
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:23–03–2020

****

ಮಾನ್ಯ ಕುಲಪತಿಗಳ ಆದೇಶದ ಮೇರೆಗೆ, ವಿಶ್ವವಿದ್ಯಾನಿಲಯದಲ್ಲಿ ಕೋವಿಡ್–19 (ಕೊರೊನಾ ವೈರಸ್) ತಡೆಗಟ್ಟುವಿಕೆ ಸಂಬಂಧ ಮುಂಜಾಗ್ರತಾ ಕ್ರಮವಾಗಿ ವಿಶ್ವವಿದ್ಯಾಲಯ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಸ್ನಾತಕೋತ್ತರ ಕೇಂದ್ರ, ಕಡೂರು / ಚಿಕ್ಕಮಗಳೂರು ಹಾಗೂ ಘಟಕ ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ದಿನಾಂಕ: 28–03–2020 ರವರೆಗೆ 15 ದಿಗಳ ರಜೆ ಘೋಷಿಸಲಾಗಿದೆ.

ಮುಂದುವರೆದು ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಹಾಗೂ ಸಾಕ್ಷರತೆ, ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ಭಾರತ ಸರ್ಕಾರ ನವದೆಹಲಿ ಇವರ ಉಲ್ಲೇಖ (1)ರ ಸೂಚನೆಗಳನ್ವಯ ಈ ಕೆಳಕಂಡಂತೆ ಕ್ರಮವಹಿಸಲು ಸೂಚಿಸಲಾಗಿದೆ.

1. ವಿಶ್ವವಿದ್ಯಾಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು ಹಾಗೂ ಘಟಕ / ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು 31-03-2020ರವರೆಗೆ ಮನೆಯಿಂದಲೇ ವಿಶ್ವವಿದ್ಯಾಲಯದ / ಕಾಲೇಜಿನ ಕಾರ್ಯಗಳನ್ನು ನಿರ್ವಹಿಸಲು ಅನುಮತಿ ನೀಡುವುದು.
2. ಬೋಧಕ ಸಿಬ್ಬಂದಿವರ್ಗದವರು ಈ ಅವಧಿಯಲ್ಲಿ ಕೆಳಕಂಡಂತೆ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು.
   - ➢ ಆನ್‌ಲೈನ್ ಮೂಲಕ ಬೋಧನೆ ಮತ್ತು ಆನ್‌ಲೈನ್ ಮೂಲಕ ಮೌಲ್ಯಮಾಪನ ಮಾಡಲು ಅಗತ್ಯವಿರುವ ಪಠ್ಯವಸ್ತು ಅಭಿವೃದ್ಧಿ ಪಡಿಸುವುದು.
   - ➢ ಮುಂದಿನ ಶೈಕ್ಷಣಿಕ ವರ್ಷಕ್ಕೆ ಅಗತ್ಯವಿರುವ ಪಠ್ಯಯೋಜನೆ / ಟಿಪ್ಪಣಿಯನ್ನು ಸಿದ್ಧಪಡಿಸುವುದು. ಹಾಗೂ ತಾವು ಬೋಧಿಸುವ ವಿಷಯದ ಪಠ್ಯವಸ್ತುವನ್ನು ಅಭಿವೃದ್ಧಿಪಡಿಸುವುದು.
   - ➢ ಲೇಖನಗಳನ್ನು ಬರೆಯುವುದು.
   - ➢ ಕೊಶ್ಚನ್ ಬ್ಯಾಂಕ್‌ಗಾಗಿ ವಿನೂತನ ಪ್ರಶ್ನೆಗಳನ್ನು ಸಿದ್ಧಪಡಿಸುವುದು. ಏಕ್ ಭಾರತ್ ಶ್ರೇಷ್ಠ್ ಭಾರತ್ ಕಾರ್ಯಕ್ರಮಕ್ಕೆ ವಿನೂತನ ಯೋಜನೆ ಸಿದ್ದಪಡಿಸುವುದು.
3. ದಿನಾಂಕ: 31–03–2020 ರವರೆಗೆ ಬೋಧಕ / ಬೋಧಕೇತರ / ಅತಿಥಿ ಉಪನ್ಯಾಸಕರು / ಏಜೆನ್ಸಿ ಸಿಬ್ಬಂದಿ ವರ್ಗದವರ ರಜಾ ಅವಧಿಯನ್ನು ಕರ್ತವ್ಯ ಎಂದು ಪರಿಗಣಿಸುವುದು.

---2